ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ರಾಜ್ಯದಲ್ಲಿರುವ ಬಿಪಿಎಲ್ ಪಡಿತರ ಚೀಟಿದಾರರ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

200(222) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪಡಿತರ ಚೀಟಿ ಪಡೆಯಲು ಅರ್ಹ ಬಿಪಿಎಲ್ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಈ ಅರ್ಹ ಬಿಪಿಎಲ್ ಪಡಿತರ ಚೀಟಿದಾರರ ಕುಟುಂಬಗಳ ಕುರಿತು ಯಾವುದಾದರೂ ಅರ್ಹತೆ/ಅನರ್ಹತೆ ಕುರಿತಾದ ಸಮೀಕ್ಷೆ ನಡೆಸಲಾಗಿದೆಯೇ; ಇಲ್ಲದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ ಒಟ್ಟು ಸರ್ಕಾರಿ ಅಥವಾ ಸರ್ಕಾರಿ ಅನುದಾನಿತ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರು ಎಷ್ಟು; (ಜಿಲ್ಲಾವಾರು /ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಅಕ್ರಮವಾಗಿ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಕುಟುಂಬಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)